## ದಿನಾಂಕ: 19/02/2022 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-109

## ಚಿಕ್ಕಪೇಟೆ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

| ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು: | | | ಗೈರು ಹಾಜರಿದ್ದ ಇಲಾಖೆ ಸಿಬ್ಬಂಧಿಗಳು |
|---|---|---|---|
| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ | |
| 1 | ಶ್ರೀ. ಎಂ.ಎಸ್. ಉಮೇಶ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ | BWSSB |
| 2 | ಶ್ರೀ. ಮೋಹನ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-109 | BESCOM |
| 3 | ಶ್ರೀ. ಅಫ್ಸರ್ ಪಾಷಾ | ಸಮಾಜ ಸೇವಕರು | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) |
| 4 | ಶ್ರೀ. ಅಸ್ಲಾಮ್ ಪಾಷ | ವಾರ್ಡ್ ಸದಸ್ಯರು | ಆರೋಗ್ಯ ವೈಧ್ಯಾಧಿಕಾರಿಗಳು |
| 5 | ಶ್ರೀ. ಪ್ರಕಾಶ್ | ವಾರ್ಡ್ ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು |
| 6 | ಶ್ರೀ. ಭಾರ್ಗವ್ ಎಸ್ | ಮಾರ್ಷಲ್ | |
| 7 | ಶ್ರೀ. ಬ್ಯಾಂಕ್ ಷಫೀ | ಸಮಾಜ ಸೇವಕರು | |
| 8 | ಶ್ರೀ. ಅಫ್ರೋಜ್ ಖಾನ್ | ಸಮಾಜ ಸೇವಕರು | |
| 9 | ಶ್ರೀ. ಗುಲಾಬ್ | ವಾರ್ಡ್ ಸದಸ್ಯರು | |
| 10 | ಶ್ರೀ. ಸತ್ಯ ನಾರಾಯಣ | ಸ್ಥಳೀಯ ನಾಗರೀಕರು | |
| 11 | ಶ್ರೀ. ಬಾಲಾಜಿ.ಎಂ.ಎಸ್ | ವಾರ್ಡ್ ಸದಸ್ಯರು | |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ಸಣ್ಣ ಕೈಗಾರಿಕೆಗಳನ್ನು ಪ್ರಾರಂಭಿಸುವ ಬಗ್ಗೆ | ಈ ಬಗ್ಗೆ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕೆಗಳು ಹೆಚ್ಚಾಗುತ್ತಿದ್ದು, ಈ ಬಗ್ಗೆ ಸದರಿ ಕೈಗಾರಿಕೆಗಳ ಪರವಾನಗಿಯ ದಾಖಲೆಗಳನ್ನು ಪರಿಶೀಲಿಸಿ ಸೂಕ್ತ ಕ್ರಮವನ್ನು ಜಾರಿ ಮಾಡುವಂತೆ ಆರೋಗ್ಯ ವೈಧ್ಯಾಧಿಕಾರಿಗಳಿಗೆ ಸೂಚಿಸಲಾಯಿತು. | ಆರೋಗ್ಯ ವೈಧ್ಯಾಧಿಕಾರಿ (ಚಿಕ್ಕಪೇಟೆ) |
| 2 | ರಸ್ತೆ ಗುಂಡಿ ಮುಚ್ಚುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಮಳೆಯಿಂದ ಹಾಗೂ BWSSB ಒಳಚರಂಡಿ ದುರಸ್ಥಿ ಕಾಮಗಾರಿಗಳಿಂದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇದನ್ನು ಮುಚ್ಚಲು ಅಗತ್ಯ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಚಿಕ್ಕಪೇಟೆ, ಸಹಾಯಕ ಅಭಿಯಂತರರು ವಾರ್ಡ್:109 |

ಪ್ರ.ತಿ.ನೋ

| | | | |
|---|---|---|---|
| 3 | ಘನತ್ಯಾಜ್ಯ ನಿರ್ವಹಣೆಯ SOP ಪಾಲಿಸದಿರುವ ಬಗ್ಗೆ | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯು ಕಾರ್ಯಾದೇಶದ ಕರಾರಿನನ್ವಯ SOP ಯನ್ನು ಪಾಲಿಸದೇ ಇರುವುದರಿಂದ ಘನತ್ಯಾಜ್ಯ ನಿರ್ವಹಣೆಯು ಸಮರ್ಪಕವಾಗಿ ನಿರ್ವಹಣೆಯಾಗದಿರುವ ಬಗ್ಗೆ ಸಭೆಯಲ್ಲಿ ದೂರು ಸಲ್ಲಿಸಿರುವ ಮೇರೆಗೆ ಸಂಬಂಧಪಟ್ಟ ಅಧಿಕಾರಿಯು ಪರಿಶೀಲಿಸಿ ಟೆಂಡರ್ ಕರಾರಿನಂತೆ ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು. | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (SWM) |
| 4 | ಚಿಕ್ಕಪೇಟೆ ರಸ್ತೆಯ ಬೀದಿದೀಪಗಳನ್ನು ಅಳವಡಿಸುವಂತೆ ಸಭೆಯಲ್ಲಿ ಕೋರಲಾಯಿತು. | ಸಭೆಯಲ್ಲಿ ಚಿಕ್ಕಪೇಟೆ ರಸ್ತೆಯು ವಾರ್ಡ್‌ನ ಪ್ರಮುಖ ರಸ್ತೆಯಾಗಿದ್ದು, ಈ ಸ್ಥಳಗಳಲ್ಲಿ ಬೀದಿದೀಪಗಳಿಲ್ಲದೆ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯೊಂಟಾಗುತ್ತಿದ್ದು ಹಾಗಿ ರಾತ್ರಿ ವೇಳೆಯಲ್ಲಿ ಈ ಪ್ರಸಾಪಿತ ಸ್ಥಳಗಳಲ್ಲಿ ಅಹಿತಕರ ಘಟನೆಗಳು ಸಂಭವವಿರುವುದರಿಂದ ಬೀದಿದೀಪಗಳನ್ನು ದುರಸ್ಥಿಪಡಿಸಲು ವಿದ್ಯುತ್ ವಿಭಾಗದವರಿಗೆ ಅಗತ್ಯ ಕ್ರಮಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಯಿತು. | ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಕಿರಿಯ ಅಭಿಯಂತರರು (ವಿದ್ಯುತ್) |
| 5 | ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಕಂಪನಿಗಳಿಗೆ ಮತ್ತು Mutton & Beaf Stall ಗಳಿಗೆ ನೋಟೀಸ್ ನೀಡುವ ಬಗ್ಗೆ. | ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳಿಂದ ಉತ್ಪತ್ತಿಯಾಗುವ ತ್ಯಾಜ್ಯವನ್ನು ನಿಯಾಮಾನುಸಾರ ವಿಲಾಏವಾರಿ ಮಾಡದೆ ಅನಧೀಕೃತವಾಗಿ ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ವಿಲೇವಾರಿ ಮಾಡುತ್ತಿರುವ ಬಗ್ಗೆ ಸಭೆಯಲ್ಲಿ ಸಾರ್ವಜನಿಕರು ದೂರುಗಳು ನೀಡಿರುವುದರಿಂದ ಸಣ್ಣ ಕೈಗಾರಿಕಾ ಉದ್ಯಮಗಳು ಮತ್ತು Mutton & Beaf Stall ಗಳ ಮಾಲೀಕರಿಗೆ ಆರೋಗ್ಯ ವೈಧ್ಯಾಧಿಕಾರಿಗಳ ಮೂಲಕ ನೋಟೀಸ್ ಜಾರಿ ಮಾಡುವಂತೆ ಸಭೆಯಲ್ಲಿ ತಿಳಿಸಲಾಯಿತು. | ಆರೋಗ್ಯ ವೈಧ್ಯಾಧಿಕಾರಿ (ಚಿಕ್ಕಪೇಟೆ) |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಿಕ್ಕಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
8. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ರವರ ಅವಗಾಹನೆಗೆ ಸಲ್ಲಿಸಿದೆ.
9. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ರವರ ಅವಗಾಹನೆಗೆ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಮತ್ತು ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಆರೋಗ್ಯ ವೈದ್ಯಾಧಿಕಾರಿ, ಚಿಕ್ಕಪೇಟೆ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ರವರಿಗೆ ಸಭೆಗೆ ಹಾಜರಾಗಲು ತಿಳಿಸಿದೆ.
13. ಸಹ ಕಂದಾಯ ಅಧಿಕಾರಿ, ಚಿಕ್ಕಪೇಟೆ ರವರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ
14. ಪೊಲೀಸ್ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಕಾಟನ್‌ಪೇಟೆ ಪೊಲೀಸ್ ಠಾಣೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
15. ಆರಕ್ಷಕ ನಿರೀಕ್ಷಕರು, ಉಪ್ಪಾರ್‌ಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
16. ವಾರ್ಡ್ ಸಂಖ್ಯೆ: 109 ಚಿಕ್ಕಪೇಟೆ ವಾರ್ಡ್ ಕಮಿಟಿ ಸದಸ್ಯರು ರವರುಗಳಿಗೆ ಸಭೆಗೆ ಹಾಜರಾಗಲು ತಿಳಿಸಿದೆ.